14

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE 22/9/2020

# ಅಗಲಿದ ಗಣ್ಯರಿಗೆ ಭಾವಪೂರ್ಣ ಶ್ರದ್ಧಾಂಜಲಿ

22/9/20

**ವಿಧಾನಸಭೆ:** ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ, ಮಾಜಿ ಸಚಿವ ಜಿ.ಸತ್ಯನಾರಾಯಣ, ಕೇಂದ್ರದ ಮಾಜಿ ಸಚಿವ ಎಂ.ವಿ.ರಾಜಶೇಖರನ್, ರಾಜ್ಯಸಭೆ ಸದಸ್ಯ ಅಶೋಕ್ ಗಸ್ತಿ, ಕೇಶವಾನಂದ ಭಾರತಿ ಸ್ವಾಮೀಜಿ, ಕವಿ ಡಾ.ಕೆ.ಎಸ್.ನಿಸಾರ್ ಅಹಮದ್, ಯಕ್ಷಗಾನ ಕಲಾವಿದ ಹೊಸ್ತೋಟ ಗಜಾನನ ಭಟ್ಟ, ಗಾನ ವಿದುಷಿ ಡಾ.ಶ್ಯಾಮಲ ಜಿ.ಭಾವೆ ಸೇರಿದಂತೆ ಅಗಲಿದ ಗಣ್ಯರಿಗೆ ಸದನದಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕೊರೊನಾದಿಂದ ಮೃತರಾದ ವಾರಿಯರ್ಸ್, ಗಲ್ವಾನ್ ಕಣಿವೆಯಲ್ಲಿ ಭಾರತ, ಚೀನಾ ನಡುವೆ ನಡೆದ ಸಂಘರ್ಷದಲ್ಲಿ ನಿಧನರಾದ ವೀರ ಸೈನಿಕರು ಹಾಗೂ ರಾಜ್ಯದಲ್ಲಿ ಪ್ರವಾಹದಿಂದ ಮೃತಪಟ್ಟವರಿಗೂ ಸಂತಾಪ ಸೂಚಿಸಲಾಯಿತು. ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಕಳೆದ 6 ತಿಂಗಳಲ್ಲಿ ಅಗಲಿದವರ ಹೆಸರು ಪ್ರಸ್ತಾಪಿಸಿ ಸಂತಾಪ ಸೂಚನೆ ನಿರ್ಣಯ ಮಂಡಿಸಿದರು.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಾತನಾಡಿ, ಪ್ರಣಬ್ ಮುಖರ್ಜಿ ಅವರು ದೇಶ ಮೆಚ್ಚುವಂತಹ ಕೆಲಸ ಮಾಡಿದ್ದರು. ಹಣಕಾಸು, ರಕ್ಷಣಾ, ವಾಣಿಜ್ಯ, ವಿದೇಶಾಂಗ ವ್ಯವಹಾರಗಳ ಸಚಿವರಾಗಿ ಯೋಜನಾ ಆಯೋಗದ ಉಪಾಧ್ಯಕ್ಷರಾಗಿ, ದೇಶದ ರಾಷ್ಟ್ರಪತಿಗಳಾಗಿ ಅವರ ಸೇವೆ ಸ್ಮರಣೀಯ. ರಾಷ್ಟ್ರದ ಅಭಿವೃದ್ಧಿ ಪಥದಲ್ಲಿ ಅಳಿಸಲಾಗದ ಗುರುತು ಬಿಟ್ಟಿರುವ ಅವರು ಶ್ರೇಷ್ಠ ವಿದ್ವಾಂಸರೂ ಹೌದು ಎಂದು ಹೇಳಿದರು.

ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಮಾತನಾಡಿ, ಜಿ.ಸತ್ಯನಾರಾಯಣ ನನಗೆ ಒಳ್ಳೆಯ ಒಡನಾಡಿ ಆಗಿದ್ದರು. ಅಶೋಕ್ ಗಸ್ತಿ ಅವರು ಕೊರೊನಾದಿಂದ ಮೃತಪಟ್ಟಿದ್ದು ತುಂಬಾ ನೋವಿನ ವಿಚಾರ ಎಂದು ತಿಳಿಸಿದರು. ಡಿ.ಕೆ. ಶಿವಕುಮಾರ್, ಜೆಡಿಎಸ್‌ನ ಬಂಡೆಪ್ಪ ಕಾಶೆಂಪುರ್, ಎಂ.ಪಿ.ಕುಮಾರಸ್ವಾಮಿ, ಸಚಿವ ಜೆ.ಸಿ.ಮಾಧುಸ್ವಾಮಿ, ಬಿಜೆಪಿಯ ನರಸಿಂಹನಾಯಕ್, ಅರಗ ಜ್ಞಾನೇಂದ್ರ ಅಗಲಿದ ಗಣ್ಯರ ಗುಣಗಾನ ಮಾಡಿದರು. ರಾಜಾ ಮದನ ಗೋಪಾಲ ನಾಯಕ್, ಜಿ.ರಾಮಕೃಷ್ಣ ರತನ್‌ಸಿಂಗ್, ವಿನ್ನಿಫ್ರೆಡ್ ಫರ್ನಾಂಡಿಸ್, ಸಿ.ಗುರುಸ್ವಾಮಿ, ಎಂ.ಅಪ್ಪಾಜಿ ಗೌಡ, ಪಂಡಿತ್ ಜಸ್‌ರಾಜ್ ಅವರಿಗೂ ಶ್ರದ್ಧಾಂಜಲಿ ಸಲ್ಲಿಸಲಾಯಿತು.

**ಮೇಲ್ಮನೆಯಲ್ಲೂ ಸಂತಾಪ:** ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ, ಕೇಂದ್ರದ ಮಾಜಿ ಸಚಿವ ಎಂ.ವಿ. ರಾಜಶೇಖರನ್, ರಾಜ್ಯಸಭಾ ಸದಸ್ಯ ಅಶೋಕ್ ಗಸ್ತಿ ಸೇರಿ 18 ಮಂದಿ ಗಣ್ಯರಿಗೆ ಹಾಗೂ ಕೊರೊನಾ ಸೋಂಕಿನಿಂದ ಮೃತಪಟ್ಟವರು, ಗಾಲ್ವಾನ್ ಕಣಿವೆಯಲ್ಲಿ ಹುತಾತ್ಮರಾದ ಯೋಧರಿಗೆ ವಿಧಾನಪರಿಷತ್‌ನಲ್ಲೂ ಸಂತಾಪ ಸೂಚಿಸಲಾಯಿತು.